# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ, ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 06 :2020-21 ದಿನಾಂಕ: 02.01.2021

## ದಾಸರಹಳ್ಳಿ ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿ.02.01.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಅಶೋಕ್ ಹಿಂದಾ, ವಾರ್ಡ್ ಕಮಿಟಿ ನೋಡಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀಮತಿ.ಅರ್ಚನ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ, ವಾರ್ಡ್ ನಂ.15
2. ಶ್ರೀ.ನಾರಾಯಣಸ್ವಾಮಿ, ಸಹಾಯಕ ಕಂದಾಯ ಅಧಿಕಾರಿ, ದಾಸರಹಳ್ಳಿ, ಉಪ-ವಿಭಾಗ
3. ಶ್ರೀ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
4. ಶ್ರೀಮತಿ.ಚೈತ್ರ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
5. ಶ್ರೀ.ಕೆ.ಆರ್.ಮೂರ್ತಿ, ಎ.ಎಸ್.ಐ, ಬಾಗಲಗುಂಟೆ ಪೋಲೀಸ್ ಠಾಣಾ ಅಧಿಕಾರಿಗಳು
6. ಶ್ರೀ.ಬಸವರಾಜು ದಶ್ರೀ.ಬಸವರಾಜು, ದಲಿತ ಸಂಘರ್ಷ ಸಮಿತಿ ಸದಸ್ಯರು, ದಾಸರಹಳ್ಳಿ, ವಾರ್ಡ್ ನಂ.15
7. ಶ್ರೀ.ಅಂಜನಗೌಡ, ಫೀಲ್ಡ್ ಮಾರ್ಷಲ್ ಬಿಬಿಎಂಪಿ
8. ಶ್ರೀಮತಿ.ಶ್ಯಾಮಲಾ, ಲಿಂಕ್ ವರ್ಕರ್ಸ್ ಘನತ್ಯಾಜ್ಯ ವಿಭಾಗ, ಬಿಬಿಎಂಪಿ
9. ಶ್ರೀ.ರಾಜು, ಎಸ್.ಸಿ/ಎಸ್.ಟಿ ದೌರ್ಜನ್ಯ ನಿಯಂತ್ರಣ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರು.
10. ಶ್ರೀ.ಅಂಬರೀಶ್, ವಿನಾಯಕ ಕನ್ನಡ ಸಂಘ ಸದಸ್ಯರು
11. ಶ್ರೀ.ಶಿವಕುಮಾರ್, ವಿನಾಯಕ ಕನ್ನಡ ಸಂಘ ಸದಸ್ಯರು

ಶ್ರೀ.ಅಶೋಕ್ ಹಿಂದಾ, ನೋಡಲ್ ಅಧಿಕಾರಿ ಹಾಗೂ ಶ್ರೀಮತಿ.ಅರ್ಚನಾ, ಸದಸ್ಯ ಕಾರ್ಯದರ್ಶಿಗಳು, ವಾರ್ಡ್ ನಂ.15, ದಾಸರಹಳ್ಳಿ, ರವರುಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ದಿ.19.12.2020 ರಂದು ನಡೆದ ವಾರ್ಡ್ ಕಮಿಟಿ ಸಭೆಯಲ್ಲಿ ಶ್ರೀ.ರಾಜು ರವರು ಕಾಳಾಸ್ತಿನಗರದ ಸಮುದಾಯ ಭವನದಲ್ಲಿರುವ ಶೌಚಾಲಯವು ಹಾಳಾಗಿದ್ದು, ತುರ್ತಾಗಿ ದುರಸ್ಥಿ ಕಾರ್ಯ ಹಾಗೂ ಸುಣ್ಣ ಬಣ್ಣ ಬಳಿಯುವ ಹಾಗೂ ಗ್ರಿಲ್ ಹಾಕುವ ಕಾಮಗಾರಿಯನ್ನು ಕೈಗೊಳ್ಳಲು ಕೋರಲಾಗಿತ್ತು, ಅದರಂತೆ ಸಮುದಾಯ ಭವನ ದುರಸ್ಥಿಗಾಗಿ ಅಂದಾಜುಪಟ್ಟಿಯನ್ನು ತಯಾರಿಸಿ, ಮಾನ್ಯ ಜಂಟಿ ಆಯುಕ್ತರು, ದಾಸರಹಳ್ಳಿ, ವಲಯ ರವರ ಅನುಮೋದನೆಗಾಗಿ ಕಡತವನ್ನು ಸಲ್ಲಿಸಲಾಗಿರುತ್ತದೆ.

**2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಅದರಲ್ಲಿ ಒಟ್ಟು ಫಾಸಿಟಿವ್ ಕೇಸ್ 1023, ಒಟ್ಟು ಬಿಡುಗಡೆ 1006, ಮರಣ ಹೊಂದಿದದವರು 07 ಹಾಗೂ ಒಟ್ಟು Active case ಪ್ರಕರಣಗಳು 10 Home Isolation ಪ್ರಕರಣಗಳು 07 & Hospitalization ಪ್ರಕರಣಗಳು 03 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ.

ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಅದರಂತೆ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾನುಸಾರ ರೂ.250.00 ಗಳನ್ನು ದಂಢ ವಿಧಿಸಿ ಕ್ರಮ ಜರುಗಿಸಲಾಗುತ್ತಿದ್ದು, ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುತ್ತಿರುವವರಿಗೆ ಪೋಲೀಸ್ ಸಹಾಯದೊಂದಿಗೆ ಪ್ರತೀ ನಿತ್ಯ ಸುಮಾರು 30 ರಿಂದ 35 ಜನಗಳಿಗೆ ದಂಢವಿಧಿಸಲಾಗುತ್ತಿದೆ ಎಂದು ಸಭೆಯಲ್ಲಿ ಮಾರ್ಷಲ್ ರವರು ವಿವರಿಸಿದರು.

**3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು. ವಾರ್ಡ್ ಸದಸ್ಯರುಗಳು ರಸ್ತೆಯ ಬದಿಯಲ್ಲಿ ಹಾಗೂ ಖಾಲಿ ನಿವೇಶಗಳಲ್ಲಿ ಸಾರ್ವಜನಿಕರು ಕಸವನ್ನು ಹಾಕುತ್ತಿರುವುದಾಗಿ ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ದೂರಿದರು ಹಾಗೂ ನೃಪತುಂಗ ರಸ್ತೆ, ಕಾಳಾಸ್ತಿನಗರ, ಮಹೇಶ್ವರಮ್ಮ ದೇವಸ್ಥಾನ, ಶ್ರೀ.ರಂಗ ವಿದ್ಯಾನಿಕೇತನ ಶಾಲೆಯ ಸುತ್ತಮುತ್ತಲಿನ ಖಾಲಿ ಜಾಗದಲ್ಲಿ ಸಾರ್ವಜನಿಕರು ಬೆಳಗಿನ ಸಮಯದಲ್ಲಿ ಕಸವನ್ನು ಹಾಕುತ್ತಿರುವುದಾಗಿ ಇದರ ಬಗ್ಗೆ ಕ್ರಮ ಕೈಗೊಳ್ಳಲು ವಾರ್ಡ್ ಸಮಿತಿಯ ಸದಸ್ಯರಾದ ಶ್ರೀ.ಮುನಿರಾಜು, ಶ್ರೀ.ಶಿವಕುಮಾರ್ ಹಾಗೂ ಶ್ರೀ.ರಾಜು ರವರು ಸೂಚಿಸಿದರು. ಸದರಿ ವಿಷಯದ ಬಗ್ಗೆ ತುರ್ತು ಕ್ರಮವಹಿಸಲು ನೋಡೆಲ್ ಅಧಿಕಾರಿ ರವರು ಆರೋಗ್ಯ ಪರಿವೀಕ್ಷಕರಿಗೆ ಹಾಗೂ ಮಾರ್ಷಲ್‌ಗಳಿಗೆ ಸಭೆಯಲ್ಲಿ ತಿಳಿಸಿದರು.

**4.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

ದಾಸರಹಳ್ಳಿ ವಾರ್ಡ್ ನಂ.15ರಲ್ಲಿ 2019-20ನೇ ಸಾಲಿನ ಆಯವ್ಯಯದಲ್ಲಿ ವಿಶೇಷ ಅಭಿವೃದ್ಧಿ ಯೋಜನೆ ಅಡಿಯಲ್ಲಿ ರೂ.99.00 ಲಕ್ಷಗಳ ಅನುದಾನ ದೊರೆತಿದ್ದು, ಸದರಿ ಕಾಮಗಾರಿಗೆ ಈಗಾಗಲೇ ಜಾಬ್‌ಕೋಡ್ ದೊರೆತಿದ್ದು, ಟೆಂಡರ್ ಪ್ರಕ್ರಿಯೆ ಹಂತದಲ್ಲಿರುತ್ತದೆ. ಸದರಿ ಸಿ.ಸಿ ಕ್ಯಾಮೆರಾಗಳನ್ನು ವಾರ್ಡ್ ವ್ಯಾಪ್ತಿಯಲ್ಲಿ ಅಳವಡಿಸಲು ಬ್ಲಾಕ್‌ಸ್ಪಾಟ್‌ಗಳನ್ನು ಗುರುತಿಸಿ ಸ್ಥಳದ ವಿವರಗಳನ್ನು ನೀಡಲು ಆರೋಗ್ಯ ಪರಿವೀಕ್ಷಕರಿಗೆ ಸಭೆಯಲ್ಲಿ ಸಹಾಯಕ ಅಭಿಯಂತರರು ತಿಳಿಸಿದರು.

**5. ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ.**

ದಾಸರಹಳ್ಳಿ ವಾರ್ಡ್ ವ್ಯಾಪ್ತಿಯ ಕಾಳಾಸ್ತಿನಗರದಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಕುಡಿಯುವ ನೀರಿಗಾಗಿ ವಾರದಲ್ಲಿ ಒಂದು ಬಾರಿ ನೀರನ್ನು ಬಿಡುತ್ತಿದ್ದು, ಇದು ಸಾಕಾಗುತ್ತಿಲ್ಲದಿರುವ ಬಗ್ಗೆ ಸಭೆಯಲ್ಲಿ ಶ್ರೀ.ರಾಜು ರವರು ತಿಳಿಸಿದರು. ಸದರಿ ವಿಷಯದ ಬಗ್ಗೆ ಚರ್ಚಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿ ಗೈರು ಹಾಜರಾದ ಕಾರಣ ಸಂಬಂಧಪಟ್ಟ ಅಧಿಕಾರಿಯನ್ನು ಸಂಪರ್ಕಿಸಿ ಕ್ರಮ ಕೈಗೊಳ್ಳುವ ಬಗ್ಗೆ ಕ್ರಮವಹಿಸಲು ವಾರ್ಡ್ ಅಭಿಯಂತರರಿಗೆ ನೋಡೆಲ್ ಅಧಿಕಾರಿ ರವರು ತಿಳಿಸಿದರು.

## 6. ವಿದ್ಯುತ್ ಸರಬರಾಜು, ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.

ಶ್ರೀ.ರಾಜು ವಾರ್ಡ್ ಸಮಿತಿ ಸದಸ್ಯರು ರವರು ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಬೀದಿದೀಪಗಳು ಕಾರ್ಯ ನಿರ್ವಹಿಸದಿರುವ ಬಗ್ಗೆ ಹಾಗೂ ಹೊಸದಾಗಿ ಬಲ್ಬ್‌ಗಳನ್ನು ಅಳವಡಿಸುವಂತೆ ಸಭೆಯಲ್ಲಿ ಪ್ರಸ್ತಾಪಿಸಿದರು.

ಸಂಬಂಧಪಟ್ಟ ಬಿಬಿಎಂಪಿ ವಿದ್ಯುತ್ ವಿಭಾಗದ ಅಧಿಕಾರಿಗಳು ಸದರಿ ವಿಷಯದ ಬಗ್ಗೆ ಪರಿಶೀಲಿಸಿ, ತುರ್ತು ಕ್ರಮವಹಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

## 7. ಒಂಟಿಮನೆಗಳ ಬಗ್ಗೆ.

ದಾಸರಹಳ್ಳಿ ವಾರ್ಡ್‌ಗೆ 2019-20ನೇ ಸಾಲಿನ ಆಯವ್ಯಯದಲ್ಲಿ ಒಂಟಿಮನೆ ನಿರ್ಮಾಣ ಯೋಜನೆ ಅಡಿಯಲ್ಲಿ ಒಟ್ಟು 29 ಮನೆಗಳು ಮಂಜೂರಾಗಿದ್ದು, ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯ ಕಛೇರಿಯಲ್ಲಿ ಆಡಳಿತಾತ್ಮಕ ಮಂಜೂರಾತಿ ಹಂತದಲ್ಲಿರುತ್ತದೆ.

ಅಂತಿಮವಾಗಿ ನೋಡೆಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 15, ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.